**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

***ಸಂಖ್ಯೆ : ಸಿ5(2)ಮುಂಬಡ್ತಿ-11/2016-17*** ದಿನಾಂಕ : 29/07/2016

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 27/07/2016 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4 :- ದಿನಾಂಕ : 29/07/2016 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆ.

* * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಿಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 27/07/2016 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಸದರಿ ಸಭೆಯಲ್ಲಿ ಅರ್ಹರೆಂದು ಪರಿಗಣಿಸಿರುವ ಅಧೀಕ್ಷಕರುಗಳಿಗೆ ಅವರೇ ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ : 29/07/2016 ರಂದು ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ ಅರ್ಹ ಅಧೀಕ್ಷಕರುಗಳು ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದು, ಅವರುಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳನಿಯುಕ್ತಿಗೊಳಿಸುವ ಸಲುವಾಗಿ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 20000-36300 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರ ಪತ್ರಾಂಕಿತ ವ್ಯವಸ್ಥಾಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆವಿಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಅಧೀಕ್ಷಕರ ಹೆಸರು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | 160 | ಕೆ.ಆರ್. ಗಂಗಾಜನಕ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು | ಸಹಾಯಕ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು ( ಶ್ರೀ ಎಸ್.ಎ. ಚಂದ್ರಶೇಖರ್ ಇವರ ಬಡ್ತಿಯಿಂದ ತೆರವಾಗುವ ಹುದ್ದೆ) |
| 2 | 211 | ಎಸ್. ಪೂರ್ಣಕಲ, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಹಾಸನ ಜಿಲ್ಲೆ, ಹಾಸನ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬೇಲೂರು ತಾ: ಹಾಸನ ಜಿಲ್ಲೆ |
| 3 | 212 | ಎನ್.ಕೆ. ಬಸವರಾಜ, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ನರಸಿಂಹರಾಜಪುರ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ |
| 4 | 222 | ಎನ್. ಶೋಭಾ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕಾರ್ಕಳ. ಉಡುಪಿ ಜಿಲ್ಲೆ |
| 5 | 239 | ಎನ್.ಆರ್. ಸೋಮಶೇಖರ್, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ. | ಸಹಾಯಕ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ( ಶ್ರೀ ಹೆಚ್. ಭೀಮಸೇನ ರಾವ್ ಇವರ ಬಡ್ತಿಯಿಂದ ತೆರವಾಗುವ ಹುದ್ದೆ) |
| 6 | 242 | ಎನ್.ಜಿ. ಸಂಪತ್ ಕುಮಾರ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶ್ರೀನಿವಾಸಪುರ ತಾಲ್ಲೂಕು, ಕೋಲಾರ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ, ರಾಮನಗರ |
| 7 | 248 | ಎನ್.ಜಿ. ನಟರಾಜ, ಅಧಿಕ್ಷಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 8 | 249 | ಹೆಚ್. ಗೋವಿಂದರಾಜು, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹೆಚ್.ಡಿ. ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಟಿ. ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ (ಶ್ರೀ ಎಂ. ಸಿದ್ದಲಿಂಗಪ್ಪ ಇವರ ಬಡ್ತಿಯಿಂದ ತೆರವಾಗುವ ಹುದ್ದೆ) |

| | | | |
|---|---|---|---|
| 9 | 251 | ಕೆ.ಆರ್. ಮುನಿಸ್ವಾಮಿಗೌಡ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ, ಕೋಲಾರ | ಪತ್ರಾಂಕಿತ ಸಹಾಯಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕೋಲಾರ ತಾಲ್ಲೂಕು, ಕೋಲಾರ (ಶ್ರೀ ಕೆ. ರವಿಶಂಕರ್ ಇವರ ಬಡ್ತಿಯಿಂದ ತೆರವಾಗುವ ಹುದ್ದೆ) |
| 10 | 264 | ಎಸ್. ದೊಡ್ಡಹಾಲಪ್ಪ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ದಾವಣಗೆರೆ ದಕ್ಷಿಣ ವಲಯ, ದಾವಣಗೆರೆ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ |
| 11 | 265 | ಟಿ.ಎನ್. ಧನಂಜಯ್ಯ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ |
| 12 | 286 | ಬಿ.ಜಿ. ನರಸಿಂಹಮೂರ್ತಿ, ಅಧೀಕ್ಷಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು. | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶೃಂಗೇರಿ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ |

**ಷರತ್ತುಗಳು :-**

1) ಈ ಬಡ್ತಿ ಆದೇಶವು, ಸಂಬಂಧಪಟ್ಟ ಯಾವುದೇ ಅಧಿಕಾರಿ / ನೌಕರರ ಸೇವಾ ಜೇಷ್ಠತೆ; ಮೀಸಲಾತಿ ಅಥವಾ ಇನ್ನಾವುದೇ ಜೇಷ್ಠತೆ / ಬಡ್ತಿ ನಿಯಮಗಳ ಪರಿಪಾಲನೆಯಲ್ಲಿ ವೈಯುಕ್ತಿಕವಾಗಿ ಉಲಂಘನೆಯಾಗಿದ್ದಲ್ಲಿ ಅಂತಹ ಅಧಿಕಾರಿ / ನೌಕರರ ಬಡ್ತಿ ತಡೆಹಿಡಿಯುವ / ರದ್ದುಪಡಿಸುವ ಷರತ್ತಿಗೆ ಒಳಗೊಂಡಿರುತ್ತದೆ.

2) ನಿಗಧಿಪಡಿಸಿರುವ ಎಲ್ಲಾ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರುವ ಪ್ರಮಾಣ ಪತ್ರದ ನೈಜತೆಯನ್ನು ಸಂಬಂಧಿಸಿದ ಪ್ರಾಧಿಕಾರದಿಂದ ತಪ್ಪದೇ ಪಡೆದುಕೊಳ್ಳತಕ್ಕದ್ದು.

(ಸಹಿ)
ಆಯುಕ್ತರು

ಇವರಿಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಸಂಬಂಧಿಸಿದ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳಿಗೆ
4) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
5) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
6) ಸಂಬಂಧಿಸಿದ ಅಧೀಕ್ಷಕರುಗಳಿಗೆ.
7) ಕಛೇರಿ ಪ್ರತಿ.